# ದಿನಾಂಕ: 13.08.2021 ರಂದು ವಾರ್ಡ್ ಸಂಖ್ಯೆ 184 ಉತ್ತರಹಳ್ಳಿ ವಾರ್ಡ್ ಕಛೇರಿಯಲ್ಲಿ ನಡೆದ ವಾರ್ಡ್ ಸಮಿತಿ ಸಭೆಯ ನಡಾವಳಿಗಳು.

**ಹಾಜರಿದ್ದ ಅಧಿಕಾರಿಗಳು:-**

1. ಶ್ರೀ ಡಿ.ಸುಂದರಯ್ಯ– ವಾರ್ಡ್ ಸಮಿತಿ ನೋಡಲ್ ಅಧಿಕಾರಿ
2. ಶ್ರೀ ವೆಂಕಟರಮಣ.ಕೆ.ವಿ – ಸಹಾಯಕ ಅಭಿಯಂತರರು ಮತ್ತು ಸಂಚಾಲಕರು (ವಾರ್ಡ್ 184ಉತ್ತರಹಳ್ಳಿ)
3. ಡಾ// ದೀಕ್ಷಿತ – ಕೋವಿಡ್–19 ಆರೋಗ್ಯ ವೈದ್ಯಾಧಿಕಾರಿಗಳು, ಬೆಂಗಳೂರು ದಕ್ಷಿಣ ವಿಭಾಗ
4. ಶ್ರೀ ಜಗದೀಶ್.ಹೆಚ್.ಆರ್ – ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಬೆಸ್ಕಾಂ,
5. ಶ್ರೀಮತಿ ರೇಷ್ಮಾ – ಸಹಾಯಕ ಅಭಿಯಂತರರು, ಬೃಹತ್ ಮಳೆ ನೀರು ಗಾಲುವೆ, ಬೊಮ್ಮನಹಳ್ಳಿ
6. ಶ್ರೀ ನಿರ್ಮಲಾ.ವೈ.ಎನ್ – ಸಹಾಯಕ ಅಭಿಯಂತರರು, ಬಿ.ಡಬ್ಲ್ಯೂ.ಎಸ್.ಎಸ್.ಬಿ ಇಲಾಖೆ
7. ಶ್ರೀ ಶಶಿಕುಮಾರ್ – ಹಿರಿಯ ಆರೋಗ್ಯ ಪರಿವೀಕ್ಷಕರು, ವಾರ್ಡ್ ಸಂಖ್ಯೆ 184
8. ಶ್ರೀ ವೆಂಕಟೇಶ್.ಕೆ – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
9. ಶ್ರೀ ಮೋಸಿಸ್ – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
10. ಶ್ರೀ ಶಿವರಾಜು – ಮೇಲ್ವಿಚಾರಕರು, ಘನತ್ಯಾಜ್ಯ ನಿರ್ವಹಣೆ
11. ಶ್ರೀ ಸಿದ್ದರಾಜು – ಮೇಲ್ವಿಚಾರಕರು, ಬೀದಿ ದೀಪಗಳು, ಬಿ.ಬಿ.ಎಂ.ಪಿ

**ಹಾಜರಿದ್ದ ಸಮಿತಿ ಸದಸ್ಯರು:-**

1. ಶ್ರೀ ಮೃತ್ಯುಂಜಯ.ಎಂ.ಎಸ್ – ಹನುಮಹಿಲ್ಸ್ ಬಡಾವಣೆRWA
2. ಶ್ರೀ ಅರುಣ್ – ಎ.ಜಿ.ಎಸ್ ಬಡಾವಣೆ RWA
3. ಶ್ರೀ ಅಮರ್.ಎಂ.ಆರ್ – ಎ.ಜಿ.ಎಸ್ ಬಡಾವಣೆ RWA

ಮೇಲೆ ಹಾಜರಿದ್ದ ಸಮಿತಿ ಸದಸ್ಯರ ಹಾಗೂ ಅಧಿಕಾರಿಗಳ ಸಮ್ಮುಖದಲ್ಲಿ ವಾರ್ಡ್ ಸಮಿತಿ ನೋಡಲ್ ಅಧಿಕಾರಿಯಾದ ಶ್ರೀ ಡಿ.ಸುಂದರಯ್ಯ ರವರು ಸಭೆಯನ್ನುದ್ದೇಶಿಸಿ ಮಾತನಾಡುತ್ತಾ, ಸಭೆ ಸೇರಿರುವ ಉದ್ದೇಶ ಮತ್ತು ಸಭೆಯ ಮಹತ್ವವನ್ನು, ಸದಸ್ಯರ ಮುಖ ಪರಿಚಯದೊಂದಿಗೆ ವಿವರಿಸುತ್ತಾ, ಹಾಜರಿದ್ದ ಸದಸ್ಯರಿಗೆ ಹಾಗೂ ಅಧಿಕಾರಿಗಳಿಗೆ ಸ್ವಾಗತ ಕೋರಿದರು.

ಸದರಿ ಸಭೆಯಲ್ಲಿ ಈ ಕೆಳಕಂಡಂತೆ ವಿವಿಧ ವಿಷಯಗಳ ಬಗ್ಗೆ ವಾರ್ಡ್ ಸಮಿತಿಯು ವಿವರವಾಗಿ ಚರ್ಚಿಸಿದಂತೆ ಮುಂದಿನ ಕ್ರಮ ಕೈಗೊಳ್ಳಲು ಸಂಬಂಧಪಟ್ಟ ಅಧಿಕಾರಿ / ಇಲಾಖೆಗಳಿಗೆ ಸ್ರಚಿಸಲಾಗಿರುತ್ತದೆ.

1. **ಬೆಂಗಳೂರು ನೀರು ಮತ್ತು ಒಳಚರಂಡಿ ಇಲಾಖೆಗೆ ಸಂಬಂಧಪಟ್ಟಂತೆ**
   - ಅರೆಹಳ್ಳಿಯಿಂದ ಬೃಂದಾವನ ರಸ್ತೆ, ನಂದಕುಮಾರ ರಸ್ತೆ ಮತ್ತು ಸಾಯಿನಗರ, ಚೈತನ್ಯ ಶಾಲೆ ಎದುರು ಹೆಚ್.ಎಂ.ಎಸ್ ಬಡಾವಣೆಯಲ್ಲಿ ಕಾವೇರಿ ಕುಡಿಯುವ ನೀರಿನ ಸಂಪರ್ಕವನ್ನು ಕಲ್ಪಿಸಿಕೊಡಲು ಕೋರಿರುತ್ತಾರೆ.
   - ಗುಬ್ಬಲಾಳ ಮುಖ್ಯರಸ್ತೆಯಲ್ಲಿ ರಸ್ತೆಯನ್ನು ಅಗೆದು ಹಾಳು ಮಾಡಿದ್ದು, ಯಥಾ ಸ್ಥಿತಿಗೆ ತರಲು ಕೋರಿರುತ್ತಾರೆ.

   ಈ ಬಗ್ಗೆ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಂಗಳೂರು ಕುಡಿಯುವ ನೀರು ಮತ್ತು ಒಳಚರಂಡಿ ಮಂಡಳಿ ರವರಿಗೆ ಸೂಚಿಸಿರುತ್ತಾರೆ.

2. **ಬೆಸ್ಕಾಂ ಇಲಾಖೆಗೆ ಸಂಬಂಧಪಟ್ಟಂತೆ.**

- ಹೆಚ್.ಎಂ.ಎಸ್ ಬಡಾವಣೆಯ ಮುಖ್ಯರಸ್ತೆಯಲ್ಲಿರುವ ಟ್ರಾನ್ಸ್‌ಫರ್‌ಮರ್‌ಅನ್ನು ಸ್ಥಳಾಂತರ ಮಾಡಲು ಕೋರಿರುತ್ತಾರೆ.
- ವಾರ್ಡ್ ವ್ಯಾಪ್ತಿಯಲ್ಲಿ ಬೆಸ್ಕಾಂನವರು ಅಗೆದಿರುವ ರಸ್ತೆ ಗುಂಡಿಗಳನ್ನು ಮುಚ್ಚಲು ಕೋರಿರುತ್ತಾರೆ.
- ವಾರ್ಡ್ ವ್ಯಾಪ್ತಿಯಲ್ಲಿ ವಿದ್ಯುತ್ ಕೇಬಲ್‌ಗಳಿಗೆ ಹೊಂದಿಕೊಂಡಂತಿರುವ ಮರದ ಕೊಂಬೆಗಳನ್ನು ರಸ್ತೆ ಬದಿಯಲ್ಲಿಯೇ ಹಾಕಿದ್ದು, ಅದನ್ನು ತೆರವುಗೊಳಿಸಲು ಸಾರ್ವಜನಿಕರು ಕೋರಿರುತ್ತಾರೆ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಂಬಂಧಪಟ್ಟ ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಇಲಾಖೆ ರವರಿಗೆ ಸೂಚಿಸಿರುತ್ತಾರೆ.

3. **ಕೋವಿಡ್–19ಗೆ ಸಂಬಂಧಪಟ್ಟಂತೆ.**

- ಪ್ರಸ್ತುತ ಉತ್ತರಹಳ್ಳಿ ವಾರ್ಡಿನಲ್ಲಿ 40 ವರ್ಷಕ್ಕೆ ಮೇಲ್ಪಟ್ಟವರಿಗೆ ಕೋವಿಡ್ ವ್ಯಾಕ್ಸಿನ್‌ಅನ್ನು ಆಯಾ ಬಡಾವಣೆಗಳಲ್ಲಿ ವ್ಯಾಕ್ಸಿನೇಷನ್ ಸೆಂಟರ್ ನಿರ್ವಹಿಸಲು ಕೋರಿರುತ್ತಾರೆ.

4. **ಉತ್ತರಹಳ್ಳಿ ಉಪವಿಭಾಗಕ್ಕೆ ಸಂಬಂಧಪಟ್ಟಂತೆ**

- ನಂದಕುಮಾರ್ ಬಡಾವಣೆ ಮತ್ತು ಹೆಚ್.ಎಂ.ಎಸ್ ಬಡಾವಣೆ ಸುತ್ತಮುತ್ತಲಿನಲ್ಲಿ ಅನಧಿಕೃತವಾಗಿ ಪಾದಚಾರಿ ಮಾರ್ಗದಲ್ಲಿ ಕಟ್ಟಡ ಸಾಮಗ್ರಿಗಳನ್ನು ಇಟ್ಟಿರುತ್ತಾರೆ. ಇದನ್ನು ತೆರವುಗೊಳಿಸಲು ಕೋರಿರುತ್ತಾರೆ.
- ನಂದಕುಮಾರ್ ಬಡಾವಣೆ ಮತ್ತು ಹೆಚ್.ಎಂ.ಎಸ್ ಬಡಾವಣೆ ಸುತ್ತಮುತ್ತಲಿನಲ್ಲಿ ಬಿದ್ದಿರುವ ರಸ್ತೆ ಗುಂಡಿಗಳನ್ನು ಮುಚ್ಚಲು ಕೋರಿರುತ್ತಾರೆ.
- ಓ.ಎಫ್.ಸಿ ಕೇಬಲ್ ಸಂಸ್ಥೆಯವರು ಚೇಂಬರ್‌ಗಳನ್ನು ರಸ್ತೆ ಮಟ್ಟಕ್ಕೆ ಸರಿಯಾದ ರೀತಿಯಲ್ಲಿ ಅಳವಡಿಸಿರುವುದಿಲ್ಲ.

ಈ ಮೇಲಿನ ಎಲ್ಲಾ ಅಂಶಗಳಿಗೆ ಕ್ರಮ ಕೈಗೊಳ್ಳಲು ಮಾನ್ಯ ನೋಡಲ್ ಅಧಿಕಾರಿ ರವರು ಸಹಾಯಕ ಕಾರ್ಯಪಾಲಕ ಅಭಿಯಂತರರು ಉತ್ತರಹಳ್ಳಿ ಉಪವಿಭಾಗ ರವರಿಗೆ ಸೂಚಿಸಿರುತ್ತಾರೆ

ಈ ಎಲ್ಲಾ ವಿಷಯದ ಬಗ್ಗೆ ಚರ್ಚಿಸಲಾಗಿ ಸೂಕ್ತ ಕ್ರಮ ಕೈಗೊಳ್ಳುವ ನಿರೀಕ್ಷಣೆಯೊಂದಿಗೆ ಸಮಿತಿಯ ಅಧ್ಯಕ್ಷರಾದ ಶ್ರೀ ಡಿ.ಸುಂದರಯ್ಯ ರವರು ಎಲ್ಲರಿಗೂ ವಂದನೆಗಳನ್ನು ಕೋರುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಶ್ರೀ ಡಿ.ಸುಂದರಯ್ಯ
ನೋಡಲ್ ಅಧಿಕಾರಿ ಹಾಗೂ ಸ.ಕಾ.ನಿ.ಅ
ಅಂಜನಾಪುರ ಉಪವಿಭಾಗ

ಶ್ರೀ ವೆಂಕಟರಮಣ.ಕೆ.ವಿ
ಸಂಚಾಲಕರು ಹಾಗೂ ಸ.ಅ–184